## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 395ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮತ್ತು ಆಟೋರಿಕ್ಷಾ ಚಾಲಕರ ಮಕ್ಕಳ ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು ವಿದ್ಯಾನಿಧಿ ಯೋಜನೆಯನ್ನು ವಿಸ್ತರಿಸಲು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆ ರೂಪಿಸುವ ಯೋಜನೆಯ ಕುರಿತು.

**ಓದಲಾಗಿದೆ:**

1. 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395
2. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರ ಸಂಖ್ಯೆ: ಸಾಆ/ತೆರಿಗೆ-04/ಆಯವ್ಯಯ/2022-23, ದಿನಾಂಕ: 03-06-2022 ಮತ್ತು 19-07-2022.
3. ಸರ್ಕಾರದ ಆದೇಶ ಸಂಖ್ಯೆ: ಆಇ 02 ಬಿಸಿಎಫ್ 2022, ದಿನಾಂಕ: 26-07-2022.
4. ಸರ್ಕಾರದ ಆದೇಶ ಸಂಖ್ಯೆ: ಟಿಡಿ 68 ಟಿಡಿಓ 2022, ದಿನಾಂಕ: 27-07-2022.
5. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರ ಸಂಖ್ಯೆ:ಸಾಆ/ತೆರಿಗೆ-04/ಆಯವ್ಯಯ/2022-23, ದಿನಾಂಕ: 23-08-2022.

****

**ಪ್ರಸ್ತಾವನೆ:**

2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395ರಲ್ಲಿ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳ ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು ವಿದ್ಯಾನಿಧಿ ಯೋಜನೆಯನ್ನು ವಿಸ್ತರಿಸಲು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆ ರೂಪಿಸುವ ಯೋಜನೆಯನ್ನು ಘೋಷಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರು 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395 ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳ ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು ವಿದ್ಯಾನಿಧಿ ಯೋಜನೆಯನ್ನು ವಿಸ್ತರಿಸಲು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆ ರೂಪಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ಆರ್ಥಿಕ ಇಲಾಖೆಯ ಆದೇಶದಲ್ಲಿ, Post Metric ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಸೇರಿದಂತೆ Yellow Board ಟ್ಯಾಕ್ಸಿ ಚಾಲಕರ ಮಕ್ಕಳ ವಿದ್ಯಾನಿಧಿ ಯೋಜನೆಗೆ ಮತ್ತು ಆಯುಷ್ಮಾನ್ ಭಾರತ್ ಯೋಜನೆಯಡಿ ಸದರಿ ಚಾಲಕರಿಗೆ ಆರೋಗ್ಯ ಗುರುತಿನ ಚೀಟಿಯನ್ನು ಆರೋಗ್ಯ ಸೌಲಭ್ಯ ಯೋಜನೆಯನ್ನು ಅನುಷ್ಠಾನಗೊಳಿಸಲು ರೂ.10.00 ಕೋಟಿಗಳನ್ನು ಸಾದಿಲ್ವಾರು ನಿಧಿಯಿಂದ ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ(4)ರ ಆದೇಶದಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395 ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳ ಮೆಟ್ರಿಕ್ ನಂತರದ (Post Metric) ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು "ವಿದ್ಯಾನಿಧಿ" ಯೋಜನೆಯನ್ನು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆಯನ್ನು ಅನುಷ್ಠಾನಗೊಳಿಸಲು ಸಹಮತಿ ನೀಡಿ ಆದೇಶಿಸಲಾಗಿದೆ.

--2

ಮೇಲೆ ಓದಲಾದ(5)ರ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪ್ರಸ್ತಾವನೆಯಲ್ಲಿ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow board) ಟ್ಯಾಕ್ಸಿ ಚಾಲಕರಿಗೆ ಮಾತ್ರ ಸಿಮೀತಗೊಳಿಸಿ ಮಕ್ಕಳ ಮೆಟ್ರಿಕ್ ನಂತರದ (Post Metric) ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು "ವಿದ್ಯಾನಿಧಿ" ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದ್ದು, ಸದರಿ ಯೋಜನೆಯನ್ನು Auto-rickshaw Cab ಚಾಲಕರ ಮಕ್ಕಳಿಗೂ ಸಹ ಅನ್ವಯವಾಗುವಂತೆ ವಿಸ್ತರಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯು ನೀಡಿರುವ ಅಭಿಪ್ರಾಯದನ್ವಯ, ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಟಿಡಿ 68 ಟಿಡಿಓ 2022,**
**ಬೆಂಗಳೂರು, ದಿನಾಂಕ: 25-08-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಟಿಡಿ 68 ಟಿಡಿಓ 2022, ದಿನಾಂಕ: 27-07-2022ರ ಆದೇಶದಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-395 ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿನ ಯೆಲ್ಲೋ ಬೋರ್ಡ್ (Yellow Board) ಟ್ಯಾಕ್ಸಿ ಚಾಲಕರ ಮಕ್ಕಳ ಮೆಟ್ರಿಕ್ ನಂತರದ (Post Metric) ಉನ್ನತ ವಿದ್ಯಾಭ್ಯಾಸವನ್ನು ಉತ್ತೇಜಿಸಲು "ವಿದ್ಯಾನಿಧಿ" ಯೋಜನೆಯನ್ನು ಮತ್ತು ಆರೋಗ್ಯ ಸೌಲಭ್ಯಕ್ಕಾಗಿ ವಿಶೇಷ ಯೋಜನೆಯನ್ನು ಅನುಷ್ಠಾನಗೊಳಿಸಲು ಸಹಮತಿ ನೀಡಿರುವುದನ್ನು **ಆಟೋರಿಕ್ಷಾ ಚಾಲಕರ** ಮಕ್ಕಳಿಗೂ ಸಹ ಅನ್ವಯವಾಗುವಂತೆ ವಿಸ್ತರಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 223 ವೆಚ್ಚ-11/2022, ದಿನಾಂಕ:23-08-2022 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Pushpa V.S.
**(ಪುಷ್ಪ ವಿ .ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸಸೌಧ, ಬೆಂಗಳೂರು: ಇವರಿಗೆ ಮುಂದಿನ ಇ-ಗೆಜೆಟ್‌ನಲ್ಲಿ ಪ್ರಕಟಿಸಲು.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) / (ಇ & ಆರ್‌ಎಸ್‌ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398 ಹಾಗೂ ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5359, ಬೆಂಗಳೂರು-560001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು.

4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ), ಬಹುಮಹಡಿಗಳ ಕಟ್ಟಡ ಬೆಂಗಳೂರು.
7. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಟಿಟಿಎಂಸಿ ಸಂಕೀರ್ಣ, ಶಾಂತಿನಗರ, ಬೆಂಗಳೂರು.
8. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
9. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಾಗಡಿ ರಸ್ತೆ, ಬೆಂಗಳೂರು.

**ಪ್ರತಿ:**

1. ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
4. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತ / ಒ.ಡಿ.ಜಿ.ಸಿ.